ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಕೊಡಗು ಜಿಲ್ಲೆಯಲ್ಲಿನ ರಸ್ತೆ ನಿರ್ಮಾಣ ಕಾರ್ಯದಲ್ಲಿ ತಂತ್ರಜ್ಞಾನ ಉನ್ನತೀಕರಿಸುವ ಕುರಿತು

ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

372 (358) ಮಾನ್ಯ ಉಪ ಮುಖ್ಯಮಂತ್ರಿಯವರು ಹಾಗೂ ಸಮಾಜ ಕಲ್ಯಾಣ ಮತ್ತು ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಮಳೆ ಹಾನಿಯಿಂದ ಲೋಕೋಪಯೋಗಿ ಇಲಾಖೆಯ ಎಷ್ಟು ಕಿಲೋಮೀಟರ್ ಉದ್ದದ ರಸ್ತೆಗಳು ಹಾನಿಯಾಗಿರುತ್ತವೆ ; (ವಿವರ ನೀಡುವುದು)

(ಆ) ಈ ಕೊಚ್ಚಿಹೋದ ರಸ್ತೆಗಳಲ್ಲಿ ಇಲ್ಲಿಯವರೆವಿಗೆ ಎಷ್ಟು ಕಿಲೋಮೀಟರ್ ಉದ್ದದ ರಸ್ತೆಗಳನ್ನು ದುರಸ್ಥಿ/ನಿರ್ಮಾಣ ಕಾರ್ಯವನ್ನು ಮಾಡಲಾಗಿದೆ; (ಮಾಹಿತಿ ನೀಡುವುದು)

(ಇ) ಜಿಲ್ಲೆಯಲ್ಲಿನ ರಸ್ತೆಗಳನ್ನು ನಿರ್ಮಾಣ ಮಾಡುವ ಸಂದರ್ಭದಲ್ಲಿ ದೇಶದ ಈಶಾನ್ಯ ರಾಜ್ಯಗಳಲ್ಲಿ ಬಳಸುವ ತಂತ್ರಜ್ಞಾನವನ್ನು ಬಳಸಲಾಗುತ್ತಿದೆಯೇ; (ವಿವರ ನೀಡುವುದು)

(ಈ) ಈಶಾನ್ಯ ರಾಜ್ಯಗಳಲ್ಲಿ ಬಳಸುವ ತಂತ್ರಜ್ಞಾನವನ್ನು ಜಿಲ್ಲೆಯಲ್ಲಿನ ರಸ್ತೆಗಳನ್ನು ನಿರ್ಮಾಣ ಮಾಡುವ ಸಂದರ್ಭದಲ್ಲಿ ಬಳಸಲು ಸರ್ಕಾರದ ನಿಲುವೇನು ?